ಕರ್ನಾಟಕ ಸರ್ಕಾರ
ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ:ಬಿಟಿಇ/03/ಇಸಿಎಸ್(1)/2025

ಆಯುಕ್ತರವರ ಕಛೇರಿ
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ
ಅರಮನೆ ರಸ್ತೆ, ಬೆಂಗಳೂರು -560001
ದೂರವಾಣಿಸಂಖ್ಯೆ:080-2220777
ದಿನಾಂಕ:28.04.2025

## ಸುತ್ತೋಲೆ

ವಿಷಯ: ಏಪ್ರಿಲ್/ಮೇ 2025 ರ ಡಿಪ್ಲೋಮ ಸೆಮಿಸ್ಟರ್ C-15 ಮತ್ತು C-20 ಪಠ್ಯಕ್ರಮಗಳಲ್ಲಿನ ಥಿಯರಿ ಪರೀಕ್ಷೆಗಳಿಗೆ ಸಂಬಂಧಿಸಿದಂತೆ ಪ್ರಾಚಾರ್ಯರು/ ಮುಖ್ಯ ಅಧೀಕ್ಷಕರು/ ಮುಖ್ಯ ವೀಕ್ಷಕರು/ ಉಪಮುಖ್ಯ ಅಧೀಕ್ಷಕರು/ ಕೊಠಡಿ ಮೇಲ್ವಿಚಾರಕರುಗಳು ಗಮನಿಸಬೇಕಾದ/ ಅನುಸರಿಸಬೇಕಾದ ಕ್ರಮಗಳ ಕುರಿತು.

ಉಲ್ಲೇಖ: ಈ ಕಛೇರಿ ಸುತ್ತೋಲೆ ಸಂಖ್ಯೆ: ಬಿಟಿಇ/03/ಇಸಿಎಸ್(1) 2025 ದಿ: 22.04.2025

***********

ಮೇಲ್ಕಂಡ ವಿಷಯಕ್ಕೆ ಸಂಬಧಿಸಿದಂತೆ, ಉಲ್ಲೇಖದ ಸುತ್ತೋಲೆಯಲ್ಲಿ ಏಪ್ರಿಲ್/ಮೇ 2025 ರ ಡಿಪ್ಲೋಮ ಸೆಮಿಸ್ಟರ್ C-15 ಮತ್ತು C-20 ಪಠ್ಯಕ್ರಮಗಳಲ್ಲಿನ ಥಿಯರಿ ಪರೀಕ್ಷೆಗಳಿಗೆ ಸಂಬಂಧಿಸಿದಂತೆ ಪ್ರಾಚಾರ್ಯರು/ ಮುಖ್ಯ ಅಧೀಕ್ಷಕರು/ಮುಖ್ಯ ವೀಕ್ಷಕರು/ ಉಪಮುಖ್ಯ ಅಧೀಕ್ಷಕರು/ ಕೊಠಡಿ ಮೇಲ್ವಿಚಾರಕರುಗಳು ಗಮನಿಸಬೇಕಾದ/ ಅನುಸರಿಸಬೇಕಾದ ಕ್ರಮಗಳ ಕುರಿತು ಮಾಹಿತಿಯನ್ನು ನೀಡಲಾಗಿತ್ತು.

ಸದರಿ ಸುತ್ತೋಲೆಯಲ್ಲಿನ ಕ್ರಮ.ಸಂ.2 C.S/D.C.S/C.O: ( C-15 & C-20ಪಠ್ಯಕ್ರಮದ ಥಿಯರಿ ಪರೀಕ್ಷೆಗಳು) ರಲ್ಲಿ ಸರ್ಕಾರಿ ಪಾಲಿಟೆಕ್ನಿಕ್ ಪರೀಕ್ಷಾ ಕೇಂದ್ರಗಳು ಶೀರ್ಷಿಕೆಯಡಿ ಬಾಹ್ಯ ಸಂಸ್ಥೆಯಿಂದ ಪರೀಕ್ಷಾ ಕೇಂದ್ರಕ್ಕೆ ನಿಯೋಜಿಸಲ್ಪಟ್ಟ ಆಂತರಿಕ ಅಂಕಗಳ ಪರಿವೀಕ್ಷಕರು C-15 & C-20 ಪಠ್ಯಕ್ರಮಗಳ ಥಿಯರಿ ವಿಷಯಗಳ ಪ್ರಶ್ನೆಪತ್ರಿಕೆಗಳ ಮುದ್ರಣ ಕಾರ್ಯದ ಅವಧಿಗಳಲ್ಲಿ ಮುಖ್ಯ ವೀಕ್ಷಕರಾಗಿ ಕರ್ತವ್ಯ ನಿರ್ವಹಿಸುವುದು ಮತ್ತು ಉಳಿದ ಸಮಯದಲ್ಲಿ ತನಿಖಾಧಿಕಾರಿಯಾಗಿ (Sitting Squad) ಕಾರ್ಯ ನಿರ್ವಹಿಸಲು ತಿಳಿಸಲಾಗಿತ್ತು.

ಮುಂದುವರೆದು ಈ ಪರೀಕ್ಷಾ ಕಾರ್ಯಕ್ಕೆ ನಿಯೋಜಿತ ಅಧಿಕಾರಿಗಳು ಗೈರು ಹಾಜರಾದಲ್ಲಿ, ಸಂಬಂಧಿಸಿದ ಪರೀಕ್ಷಾ ಕೇಂದ್ರದ ಪ್ರಾಂಶುಪಾಲರು ಈ ಕುರಿತು ಕೂಡಲೇ ಕಾರ್ಯದರ್ಶಿ ತಾಂ.ಪ.ಮಂ. ಇವರಿಗೆ ವರದಿ ಸಲ್ಲಿಸುವಂತೆ ತಿಳಿಸಲಾಗಿದೆ.

ಕಾರ್ಯದರ್ಶಿ
ತಾಂತ್ರಿಕ ಪರೀಕ್ಷಾ ಮಂಡಳಿ

ಇವರಿಗೆ,

1. ಸರ್ಕಾರಿ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರುಗಳು/ ಪರೀಕ್ಷಾ ಕೇಂದ್ರಗಳ ಮುಖ್ಯ ಅಧೀಕ್ಷಕರು (C-15 ಮತ್ತು & C-20 ಪಠ್ಯಕ್ರಮ)- ಅಗತ್ಯ ಕ್ರಮಕ್ಕಾಗಿ
2. ಮುಖ್ಯ ವೀಕ್ಷಕರು/ಉಪಮುಖ್ಯ ಅಧೀಕ್ಷಕರುಗಳು/ ಪ್ರಶ್ನೆಪತ್ರಿಕೆ ಭದ್ರತಾ ಅಧಿಕಾರಿಗಳು - ಸಂಬಂಧಪಟ್ಟ ಪ್ರಾಚಾರ್ಯರುಗಳ ಮೂಲಕ

ಪ್ರತಿ

1. ಆಪ್ತಶಾಖೆ, ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖ
2. ಆಪ್ತಶಾಖೆ, ನಿರ್ದೇಶಕರು, ತಾಂತ್ರಿಕ ಶಿಕ್ಷಣ, ತಾಂತ್ರಿಕ ಶಿಕ್ಷಣ ಭವನ
3. ಆಪ್ತಶಾಖೆ, ಕಾರ್ಯದರ್ಶಿ, ತಾಂತ್ರಿಕ ಪರೀಕ್ಷಾ ಮಂಡಳಿ
4. ಕಂಪ್ಯೂಟರ್ ಕೇಂದ್ರ – ಬಿಟಿಇಲಿಂಕ್ಸ್ ವೆಬ್‌ಪೋರ್ಟಲ್‌ನಲ್ಲಿ ಪ್ರಕಟಿಸಲು
5. ಇ- ಆಡಳಿತ – ವೆಬ್‌ಸೈಟ್‌ನಲ್ಲಿ ಪ್ರಕಟಿಸಲು